ಗ್ರಾಮೀಣಾಭಿವೃದ್ಧಿ ಇಲಾಖೆಯಲ್ಲಿ ಸಿಬ್ಬಂದಿ ಕೊರತೆ

477 (899) ಶ್ರೀ ಕಿಮ್ಮನೆ ರತ್ನಾಕರ್, ತೀರ್ಥಹಳ್ಳಿ ಕ್ಷೇತ್ರ ವಿಧಾನ ಸಭಾ ಸದಸ್ಯರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತೀರ್ಥಹಳ್ಳಿ ಮತಕ್ಷೇತ್ರದ ಹೊಸನಗರ ಮತ್ತು ತೀರ್ಥಹಳ್ಳಿ ತಾಲ್ಲೂಕು ಪಂಚಾಯಿತಿಗಳಲ್ಲಿ ಇಂಜಿನಿಯರು ಮತ್ತು ಸಿಬ್ಬಂದಿಗಳ ಕೊರೆತ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ತಾಲ್ಲೂಕು ಪಂಚಾಯತ್‌ನಲ್ಲಿ ಇರುವ ಸಿಬ್ಬಂದಿಗಳ ಕೊರತೆಯ ಸಂಖ್ಯೆ ಎಷ್ಟು;

ಇ) ಈ ತಾಲ್ಲೂಕಿನ ಪಂಚಾಯತ್‌ನಲ್ಲಿ ಖಾಲಿ ಇರುವ ಹುದ್ದೆ ಭರ್ತಿ ಮಾಡಲು ಸರ್ಕಾರ ತುರ್ತು ಕ್ರಮ ಕೈಗೊಂಡಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಸಚಿವರು) :

ಅ) ತಾಲ್ಲೂಕು ಪಂಚಾಯಿತಿಗಳಲ್ಲಿ ಇಂಜಿನಿಯರುಗಳ ಮಂಜೂರಾದ ಹುದ್ದೆ ಇರುವುದಿಲ್ಲ. ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗದ ಇಂಜಿನಿಯರುಗಳೇ ತಾಲ್ಲೂಕು ಪಂಚಾಯಿತಿಗಳ ಕಾಮಗಾರಿಗಳ ಅನುಷ್ಠಾನವನ್ನು ನಿರ್ವಹಿಸುವರು. ಇತರ ಇಂಜಿನಿಯರಿಂಗ್ ವರ್ಗದ ಸಿಬ್ಬಂದಿ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಆ)

ಕಛೇರಿ	ಮಂಜೂರಾದ ಹುದ್ದೆಗಳು	ಭರ್ತಿಯಾದ ಹುದ್ದೆಗಳು	ಖಾಲಿ ಇರುವ ಹುದ್ದೆಗಳು
ತಾ.ಪಂ. ಹೊಸನಗರ	80	52	28
ತಾ.ಪಂ. ತೀರ್ಥಹಳ್ಳಿ	72	59	13

ಇ) ಖಾಲಿ ಇರುವ ಇಂಜಿನಿಯರಿಂಗ್ ವರ್ಗದ ಹುದ್ದೆಗಳು ಅಂದರೆ ಸಹಾಯಕ ಇಂಜಿನಿಯರ್ ಮತ್ತು ಕಿರಿಯ ಇಂಜಿನಿಯರ್ ಹುದ್ದೆಗಳನ್ನು ಆದ್ಯತೆಯ ಮೇಲೆ ತುಂಬುವ ಸಲುವಾಗಿ ಅವರುಗಳ ಸೇವೆಯನ್ನು ಲೋಕೋಪಯೋಗಿ ಇಲಾಖೆಯಿಂದ ಕೂಡಲೇ ಪಡೆದು ಅಗತ್ಯ ಕ್ರಮವಹಿಸಲು ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ ಮತ್ತು ಮುಖ್ಯ ಇಂಜಿನಿಯರ್ (ಸಂಪರ್ಕ ಮತ್ತು ಕಟ್ಟಡ), ಲೋಕೋಪಯೋಗಿ ಇಲಾಖೆ ಇವರಿಗೆ ಸೂಚಿಸಲಾಗಿದೆ.

478 (900) ಶ್ರೀ ಕಿಮ್ಮನೆ ರತ್ನಾಕರ್ (ತೀರ್ಥಹಳ್ಳಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗ್ರಾಮೀಣಾಭಿವೃದ್ಧಿ ಇಲಾಖೆಯಿಂದ ಪ್ರತಿಗ್ರಾಮ ಪಂಚಾಯಿತಿ, ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಗಳಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರ ಅಳವಡಿಸಿದ ಮಾನದಂಡವೇನು;

ಆ) ಗ್ರಾಮ ಪಂಚಾಯ್ತಿಗಳಿಗೆ ಬಿಡುಗಡೆಯಾಗುತ್ತಿರುವ ಅನುದಾನ ಅತ್ಯಂತ ಕಡಿಮೆ ಇದ್ದು ಗ್ರಾಮೀಣಾಭಿವೃದ್ಧಿ ಕೆಲಸ ಕಾರ್ಯಗಳಿಗೆ ಸಾಕಾಗದೆ ಅಭಿವೃದ್ಧಿ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಗ್ರಾಮೀಣಾಭಿವೃದ್ಧಿ ಇಲಾಖೆ ವತಿಯಿಂದ ಪ್ರತಿ ತಾಲ್ಲೂಕು ಪಂಚಾಯತಿ ಕ್ಷೇತ್ರಕ್ಕೆ ಪ್ರತಿ ಸಾಲಿನಲ್ಲಿ ಬಿಡುಗಡೆ ಮಾಡುತ್ತಿರುವ ಒಂದೂವರೆ ಲಕ್ಷ ರೂಪಾಯಿ ಮೀರಿರುವುದಿಲ್ಲ; ಹಾಗಿದ್ದಲ್ಲಿ, ತಾಲ್ಲೂಕು ಪಂಚಾಯ್ತಿಯ ಅಸ್ತಿತ್ವದ ಅಗತ್ಯ ಇದೆಯೇ;

ಈ) ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಸೌಲಭ್ಯ ಒದಗಿಸಲು ಗ್ರಾಮೀಣಾಭಿವೃದ್ಧಿ ಇಲಾಖೆ ಮೇಲ್ಕಂಡ ಅನುದಾನ ಬಳಸಿಕೊಳ್ಳಬೇಕೆ ಅಥವಾ ಬೇರೆ ಅನುದಾನ ಮೀಸಲಿಟ್ಟಿದೆಯೇ?

ಶ್ರೀ ಜಗದೀಶ್ ಶೆಟ್ಟರ್ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು) :

ಅ) ಕೇಂದ್ರ ಸರ್ಕಾರದಿಂದ ಬಿಡುಗಡೆಯಾಗುವ 13ನೇ ಹಣಕಾಸು ಯೋಜನೆಯ ಅನುದಾನವನ್ನು ರಾಜ್ಯದ ಗ್ರಾಮ/ ತಾಲ್ಲೂಕು/ ಜಿಲ್ಲಾ ಪಂಚಾಯತಿಗಳಿಗೆ ಜನಸಂಖ್ಯೆ ಮಾನದಂಡ ಆಧಾರದ ಮೇಲೆ ಬಿಡುಗಡೆ